ಹಿಮ್ಮಡಿ ಗಾಯಕ್ಕೆ ಶಸ್ತ್ರಚಿಕಿತ್ಸೆ

ಕೆಳಗೆ ಬಿದ್ದಾಗ ಹಿಮ್ಮಡಿಗೆ ಗಾಯವಾಗಿತ್ತು. ಅದಕ್ಕೆ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡಿದ್ದೇನೆ. ಸದ್ಯ ಚೇತರಿಸಿಕೊಳ್ಳುತ್ತಿದ್ದೇನೆ. ಆದಷ್ಟು ಬೇಗ ಮೈದಾನಕ್ಕೆ ಮರಳುವ ವಿಶ್ವಾಸವಿದೆ. ಅಭಿಮಾನಿಗಳು ಪ್ರಾರ್ಥಿಸಿ, ಹಾರೈಸಿ ಎಂದು ಕೋರಿದ್ದಾರೆ.

ಕಾಲ್ತುಳಿತ ಪ್ರಕರಣ: ಸಿಎಂ ಸಿದ್ದರಾಮಯ್ಯ ಸೇರಿ 18 ಮಂದಿ ವಿರುದ್ಧ ಎಫ್‌ಐಆರ್

ಬೆಂಗಳೂರು: ಆರ್‌ಸಿಬಿ ವಿಜಯೋತ್ಸವ ಸಂಭ್ರಮಾಚರಣೆ ವೇಳೆ ಕಾಲ್ತುಳಿತ ಪ್ರಕರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ 18 ಮಂದಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಕ್ರೀಡಾ ಸಚಿವ ನಾಗೇಂದ್ರ, ಆರ್‌ಸಿಬಿ ಮಾಲೀಕರಾದ ಡಿಯಾಜಿಯೊ ಇಂಡಿಯಾ ಕಂಪನಿ ಅಧಿಕಾರಿಗಳು ಸೇರಿ 18 ಮಂದಿ ವಿರುದ್ಧ ಪ್ರಕರಣ ದಾಖಲಾಗಿದೆ. ಕಾಲ್ತುಳಿತ ಪ್ರಕರಣದಲ್ಲಿ 11 ಮಂದಿ ಮೃತಪಟ್ಟಿದ್ದು, 33 ಮಂದಿ ಗಾಯಗೊಂಡಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರ ಸೂಚನೆಯಂತೆ ಕಾಲ್ತುಳಿತ ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆಗೆ ಆದೇಶಿಸಲಾಗಿದೆ. ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಜಾನ್ ಮೈಕಲ್ ಡಿ'ಕುನ್ಹಾ ಅವರು ಏಕಸದಸ್ಯ ನ್ಯಾಯಾಂಗ ತನಿಖಾ ಆಯೋಗದ ಮುಖ್ಯಸ್ಥರಾಗಿದ್ದಾರೆ. ಆಯೋಗಕ್ಕೆ ಮೂರು ತಿಂಗಳ ಕಾಲಾವಕಾಶ ನೀಡಲಾಗಿದ